ಕರ್ನಾಟಕ ಸರ್ಕಾರದ ನಡವಳಿಗಳು
ಜಲಸಂಪನ್ಮೂಲ ಇಲಾಖೆ

ವಿಷಯ:- ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಸ್ವರ್ಣಾ ನದಿಗೆ ಅಡ್ಡಲಾಗಿ ಉಪ್ಪೂರು, ಪರರಿ ಮತ್ತು ಹಾವಂಜೆ ಗ್ರಾಮಗಳ ಹತ್ತಿರ ಬ್ರಿಡ್ಜ್ ಕಂ ಬ್ಯಾರೇಜ್ /ಉಪ್ಪು ನೀರು ತಡೆ ಅಣೆಕಟ್ಟು ನಿರ್ಮಿಸಿ, ಅಂತರ್ಜಲ ಮಟ್ಟ ಅಭಿವೃದ್ಧಿ ಮತ್ತು ಏತ ನೀರಾವರಿ ಮೂಲಕ ಸುತ್ತಮುತ್ತಲಿನ ಕೆರೆ ಕಟ್ಟೆಗಳನ್ನು ತುಂಬಿಸಿ ಸುಮಾರು 1000 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸುವ ರೂ.165.00 ಕೋಟಿ ಮೊತ್ತದ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ ಟಿವಿಪಿ/ಸ್ವರ್ಣಾ ಏನೀಯೋ/2020-21/ 3752, ದಿನಾಂಕ:04.11.2020, ಸಂ.5208, ದಿ:02.12.2020 & ಸಂ. 0435, ದಿನಾಂಕ : 29.04.2022.

----****----

**ಪ್ರಸ್ತಾವನೆ:-**

ಮೇಲೆ ಓದಲಾದ ಪತ್ರಗಳಲ್ಲಿ, ವ್ಯನಿ., ಕನೀನಿನಿ ರವರು ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಅನೇಕ ಗ್ರಾಮಗಳಲ್ಲಿ, ಬೇಸಿಗೆ ಕಾಲದಲ್ಲಿ ಅಂತರ್ಜಲ ಮಟ್ಟ ತೀವ್ರವಾಗಿ ಕುಸಿಯುತ್ತಿದ್ದು, ಕುಡಿಯುವ ನೀರಿಗೆ ಕೊರತೆ ಉಂಟಾಗಿರುತ್ತದೆ; ಮಳೆಯ ಅಭಾವದಿಂದ ನಾಲೆಗಳಲ್ಲಿ ಅವಶ್ಯ ನೀರು ಹರಿಯದೆ, ಬೆಳೆಗೆ ನೀರಿನ ಕೊರತೆ ಉಂಟಾಗಿರುತ್ತದೆ; ಉಡುಪಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಕೊರತೆ ಇರುವುದರಿಂದ ಸ್ವರ್ಣಾ ನದಿಗೆ ಅಡ್ಡಲಾಗಿ ಉಪ್ಪೂರು, ಪರರಿ ಮತ್ತು ಹಾವಂಜೆ ಗ್ರಾಮಗಳ ಹತ್ತಿರ ಬ್ರಿಡ್ಜ್ ಕಂ ಬ್ಯಾರೇಜ್ /ಉಪ್ಪು ನೀರು ತಡೆ ಅಣೆಕಟ್ಟು ನಿರ್ಮಿಸಿ, ಅಂತರ್ಜಲ ಮಟ್ಟ ಅಭಿವೃದ್ಧಿ ಪಡಿಸಲು ಸುತ್ತಮುತ್ತಲಿನ ಹಳ್ಳಿಗಳಿಗೆ ಕುಡಿಯುವ ನೀರು ಹಾಗೂ ಸುಮಾರು 1,000 ಹೆಕ್ಟೇರ್ ಪ್ರದೇಶಕ್ಕೆ ಏತ ನೀರಾವರಿ ಸೌಲಭ್ಯವನ್ನು ಕಲ್ಪಿಸಲು ಹಾಗೂ ನದಿದಂಡೆ ಸುಭದ್ರಗೊಳಿಸುವಂತೆ ಸ್ಥಳೀಯ ರೈತರು ಮತ್ತು ಜನಪ್ರತಿನಿಧಿಗಳು ಕೋರಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, ಪ್ರಸ್ತಾವನೆಯನ್ನು ದಿನಾಂಕ:04.09.2020 ರಂದು ನಡೆದ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 71ನೇ ಸಭೆಯಲ್ಲಿ ಮಂಡಿಸಲಾಗಿ, ಸಮಿತಿಯು ಉಡುಪಿ ಜಿಲ್ಲೆ, ಉಡುಪಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಸ್ವರ್ಣಾ ನದಿಗೆ ಅಡ್ಡಲಾಗಿ ಉಪ್ಪೂರು, ಪರರಿ ಮತ್ತು ಹಾವಂಜೆ ಗ್ರಾಮಗಳ ಹತ್ತಿರ ಬ್ರಿಡ್ಜ್ ಕಂ ಬ್ಯಾರೇಜ್ /ಉಪ್ಪು ನೀರು ತಡೆ ಅಣೆಕಟ್ಟು ನಿರ್ಮಿಸಿ, ಅಂತರ್ಜಲ ಮಟ್ಟ ಅಭಿವೃದ್ಧಿ ಮತ್ತು ಏತ ನೀರಾವರಿ ಮೂಲಕ ಸುತ್ತಮುತ್ತಲಿನ ಕೆರೆ ಕಟ್ಟೆಗಳನ್ನು ತುಂಬಿಸಿ ಸುಮಾರು 1,000 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸುವ (1ನೇ ಹಂತ ರೂ.115.00 ಕೋಟಿ ಮತ್ತು 2ನೇ ಹಂತ ರೂ.50.00 ಕೋಟಿ) ಒಟ್ಟು ರೂ.165.00 ಕೋಟಿ ಮೊತ್ತದ (ನೂರಾ ಅರವತ್ತೈದು ಕೋಟಿ ರೂಪಾಯಿಗಳು ಮಾತ್ರ) ಯೋಜನೆಯ ವಿವರವಾದ ಯೋಜನಾ ವರದಿಗೆ ನಿಗಮದ ನಿರ್ದೇಶಕರ ಮಂಡಳಿ ಸಭೆಯ ಅನುಮೋದನೆಯೊಂದಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸುವಂತೆ ಶಿಫಾರಸ್ಸು ಮಾಡಿರುವುದಾಗಿ ಹಾಗೂ ಸದರಿ ಯೋಜನೆಯ ಪ್ರಸ್ತಾವನೆಯನ್ನು ದಿನಾಂಕ:05.10.2020 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 93ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಉಡುಪಿ ಜಿಲ್ಲೆ/ತಾಲ್ಲೂಕಿನ ವ್ಯಾಪ್ತಿಯಲ್ಲಿ ಸ್ವರ್ಣಾ ನದಿಗೆ ಅಡ್ಡಲಾಗಿ ಉಪ್ಪೂರು, ಪರರಿ ಮತ್ತು ಹಾವಂಜೆ ಎಂಬಲ್ಲಿ ಬ್ರಿಡ್ಜ್ ಕಂ ಬ್ಯಾರೇಜ್ /ಉಪ್ಪು ನೀರು ತಡೆ ಅಣೆಕಟ್ಟು ನಿರ್ಮಿಸಿ, ಅಂತರ್ಜಲ ಮಟ್ಟ ಅಬಿವೃದ್ಧಿ, ಕುಡಿಯುವ ನೀರು ಹಾಗೂ ಸುಮಾರು 1,000 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸುವ ಕಾಮಗಾರಿಗಳನ್ನು ಎರಡು ಹಂತಗಳಲ್ಲಿ (ಹಂತ-1ರಲ್ಲಿ ರೂ.115.00 ಕೋಟಿ + ಹಂತ-2ರಲ್ಲಿ ರೂ.50.00 ಕೋಟಿ) ಕೈಗೊಳ್ಳುವ ಒಟ್ಟು ರೂ.165.00 ಕೋಟಿ ಮೊತ್ತದ ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 36 ಎಂಎಂಎಂ 2020, ಬೆಂಗಳೂರು,**
**ದಿನಾಂಕ:24.05.2022**

ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಸ್ವರ್ಣಾ ನದಿಗೆ ಅಡ್ಡಲಾಗಿ ಉಪ್ಪೂರು, ಪರರಿ ಮತ್ತು ಹಾವಂಜೆ ಗ್ರಾಮಗಳ ಹತ್ತಿರ ಬ್ರಿಡ್ಜ್ ಕಂ ಬ್ಯಾರೇಜ್ /ಉಪ್ಪು ನೀರು ತಡೆ ಅಣೆಕಟ್ಟು ನಿರ್ಮಿಸಿ, ಅಂತರ್ಜಲ ಮಟ್ಟ ಅಭಿವೃದ್ಧಿ ಮತ್ತು ಏತ ನೀರಾವರಿ ಮೂಲಕ ಸುತ್ತಮುತ್ತಲಿನ ಕೆರೆ ಕಟ್ಟೆಗಳನ್ನು ತುಂಬಿಸಿ ಸುಮಾರು 1,000 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸುವ ಕಾಮಗಾರಿಗಳನ್ನು ಎರಡು ಹಂತ (ಹಂತ-1ರಲ್ಲಿ ರೂ.115.00 ಕೋಟಿ + ಹಂತ-2ರಲ್ಲಿ ರೂ.50.00 ಕೋಟಿ)ಗಳಲ್ಲಿ ಕೈಗೊಳ್ಳಲು 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.165.00 ಕೋಟಿ ಮೊತ್ತದ (ನೂರಾ ಅರವತ್ತೈದು ಕೋಟಿ ರೂಪಾಯಿಗಳು ಮಾತ್ರ) ಯೋಜನೆಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್/ಎಂಸಿಎಂ/6/2021/ಪಿಪಿಡಿ, ದಿನಾಂಕ:15.01.2021ರಲ್ಲಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 49 ಆಕೋ-1/2021 (ಇ-ಆಫೀಸ್) ದಿನಾಂಕ:09.11.2021ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Shubha K 24/05/2022

**(ಶುಭಾ ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)(ಪ್ರ),
ಜಲಸಂಪನ್ಮೂಲ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಜಂಟಿ ಕಾರ್ಯದರ್ಶಿಗಳು (ಸಚಿವ ಸಂಪುಟ ಶಾಖೆ) ವಿಧಾನ ಸೌಧ, ಬೆಂಗಳೂರು. ( ಪ್ರಕರಣ ಸಂಖ್ಯೆ ಸಿ: 231/2022, ದಿನಾಂಕ : 12.05.2022) ಮಾಹಿತಿಗಾಗಿ
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯರ್ಶಿ, ಯೋಜನಾ ಇಲಾಖೆ.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
11. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ), ಜಲಸಂಪನ್ಮೂಲ ಇಲಾಖೆ.
13. ತಾಂತ್ರಿಕ ಸಹಾಯಕರು, ತಾಂತ್ರಿಕ-6, ಜ.ಸಂ.ಇ.
14. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.